# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1066** |
| ಸದಸ್ಯರ ಹೆಸರು | : | **ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ)** |
| ಉತ್ತರಿಸುವ ದಿನಾಂಕ | : | **16/12/2025** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು** |

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ ಅಧ್ಯಕ್ಷರು. ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="3">ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಮತ್ತು ಮಹಾನಗರ ಪಾಲಿಕೆಗಳಲ್ಲಿನ ಮೇಯರ್, ಉಪಮೇಯರ್ ಮತ್ತು ಸದಸ್ಯರ ಗೌರವಧನವನ್ನು ಹೆಚ್ಚಳ ಮಾಡುವ ಕುರಿತು ಇತರ ರಾಜ್ಯಗಳ ಚುನಾಯಿತ ಪ್ರತಿನಿಧಿಗಳ ಗೌರವಧನದ ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಗೌರವಧನವನ್ನು ಹೆಚ್ಚಳ ಮಾಡುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ದಿನಾಂಕ:20/09/2025 ರ ಪತ್ರದನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರನ್ನು ಕೋರಲಾಗಿತ್ತು. ಪ್ರಸ್ತುತ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ಗೌರವಧನ ಪರಿಷ್ಕರಿಸಲು ಅವಕಾಶವಾಗುತ್ತದೆ.<br>ಪ್ರಸ್ತುತ ರಾಜ್ಯದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಸರ್ಕಾರದ ಆದೇಶದ ಸಂಖ್ಯೆ:ನಅಇ 156 ಎಂಎಲ್ಆರ್ 201; ದಿನಾಂಕ:15/09/2016 ರನ್ವಯ ಗೌರವಧನವನ್ನು ನೀಡಲಾಗುತ್ತಿದೆ. ವಿವರ:
<table>
<tr><th colspan="7">ಪ್ರಸ್ತುತ ನೀಡಲಾಗುತ್ತಿರುವ ಗೌರವಧನ (ಮಾಸಿಕ)</th></tr>
<tr><th>ಕ್ರ. ಸಂ</th><th>ನಗರ ಸ್ಥಳೀಯ ಸಂಸ್ಥೆಗಳು</th><th>ಅಧ್ಯಕ್ಷರು</th><th>ಉಪಾಧ್ಯಕ್ಷರು</th><th>ಸ್ಥಾಯಿಸಮಿತಿ ಸದಸ್ಯರು</th><th>ಸದಸ್ಯರು</th><th>ನಾಮ ನಿರ್ದೇಶನ ಸದಸ್ಯರು</th></tr>
<tr><td>1</td><td>ನಗರಸಭೆ –1</td><td>12000</td><td>8000</td><td>400</td><td>4000</td><td>4000</td></tr>
<tr><td>2</td><td>ನಗರಸಭೆ – 2</td><td>8000</td><td>4000</td><td>400</td><td>2000</td><td>2000</td></tr>
<tr><td>3</td><td>ಪುರಸಭೆ</td><td>4800</td><td>2400</td><td>300</td><td>1200</td><td>1200</td></tr>
<tr><td>4</td><td>ಪಟ್ಟಣ ಪಂಚಾಯಿತಿ</td><td>3200</td><td>1600</td><td>200</td><td>800</td><td>800</td></tr>
</table></td></tr>
<tr><td>ಆ</td><td>ಬಂದಿದ್ದಲ್ಲಿ, ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ ಅಧ್ಯಕ್ಷರು. ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪ್ರಸ್ತುತ ನೀಡುತ್ತಿರುವ ಗೌರವಧನದ ವಿವರಗಳೇನು:</td></tr>
<tr><td>ಇ</td><td>ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ನಿರಂತರವಾಗಿ ವ್ಯವಹರಿಸುವ ಮತ್ತು ಸ್ಪಂದಿಸುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ</td></tr>
</table>

| | | |
|---|---|---|
| | ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು? | |

**ಸಂಖ್ಯೆ:ನಅಇ 56 ಎಲ್‌ಸಿಕ್ಯೂ 2025**

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು